ಇ) ಈ ಯೋಜನೆಯನ್ನು ಮೈಸೂರು ಮಹಾನಗರ ಪಾಲಿಕೆಯವರು ಸ್ವಂತ ಕಾಮಗಾರಿ ನಿರ್ವಹಣಾ ರೀತಿಯಲ್ಲಿ ತಾವೇ ಸ್ವಯಂ ನಿರ್ವಹಿಸಬೇಕಾಗಿರುತ್ತದೆ.

835(1321) ಶ್ರೀ ಶಂಕರಲಿಂಗೇಗೌಡ ಹೆಚ್. ಎಸ್. (ಚಾಮರಾಜ): ಮಾನ್ಯ ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮೈಸೂರು ಮಹಾನಗರ ಪಾಲಿಕೆಯ ವಾಣಿವಿಲಾಸ ನೀರು ಸರಬರಾಜು ಕಾರ್ಯಾಲಯದಲ್ಲಿ ಮೈಸೂರು ನಗರ ನೀರು ಸರಬರಾಜು ನಿರ್ವಹಣೆ ಮಾಡಲು ಗುತ್ತಿಗೆ ಕಾರ್ಮಿಕರನ್ನು ನಿಯೋಜಿಸಲು ಅನುಸರಿಸುತ್ತಿರುವ ಕ್ರಮವು ಗುತ್ತಿಗೆ ಕಾರ್ಮಿಕ ಕಾಯ್ದೆ (ನಿಷೇದ ಮತ್ತು ನಿಯಂತ್ರಣ) 1970ರ ನಿಯಮಗಳಿಗೆ ಅನುಗುಣವಾಗಿದೆಯೇ: ಇಲ್ಲದಿದ್ದಲ್ಲಿ ಯಾವ ಯಾವ ರೀತಿಯಲ್ಲಿ ಕಾನೂನು ಉಲ್ಲಂಘನೆಯಾಗಿದೆ:

ಆ) ಕಾನೂನು ಉಲ್ಲಂಘನೆಯಾಗಿದ್ದಲ್ಲಿ ತಡೆಗಟ್ಟಲು ಕಾರ್ಮಿಕ ಇಲಾಖೆಯು ಕೈಗೊಂಡ ಕ್ರಮಗಳೇನು;

ಇ) ಗುತ್ತಿಗೆ ಕಾರ್ಮಿಕ ಪದ್ಧತಿಯು ಕಪಟವಾಗಿದ್ದರೆ ಅಥವಾ ಅಕ್ರಮವಾಗಿದ್ದರೆ, ವಾಸ್ತವಿಕವಾಗಿ ಅಂತಹ ಗುತ್ತಿಗೆ ಕಾರ್ಮಿಕರನ್ನು ಪ್ರಧಾನ ಉದ್ಯೋಗದಾತರ ಉದ್ಯೋಗಿಗಳೆಂದು ಪರಿಗಣಿಸಬೇಕೆಂದು ಸುಪ್ರೀಂ ಕೋರ್ಟ್ ಪಂಚಪೀಠವು (2001) 7 sece (Steel authority of India Ltd v/s National Union Water Front Workers) ರಲ್ಲಿ ತೀರ್ಮ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಮೇಲ್ಕಂಡ ಸುಪ್ರೀಂ ಕೋರ್ಟ್ ತೀರ್ಪಿನ ಪ್ರಕಾರ ಮೈಸೂರು ಮಹಾನಗರ ಪಾಲಿಕೆಯ ವಾಣಿವಿಲಾಸ ನೀರು ಸರಬರಾಜು ಕಾರ್ಯಾಲಯದ ಗುತ್ತಿಗೆ ಕಾರ್ಮಿಕರನ್ನು ಮೈಸೂರು ಮಹಾನಗರ ಪಾಲಿಕೆಯು ತನ್ನ ಉದ್ಯೋಗಿಗಳೆಂದು ಪರಿಗಣಿಸದಿರುವುದು ಅಕ್ರಮವಲ್ಲವೇ;

ಶ್ರೀ ತನ್ವೀರ್ ಸೇಟ್ (ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು):

ಅ) ಗುತ್ತಿಗೆ ಕಾರ್ಮಿಕರನ್ನು ನಿಯೋಜಿಸಿದ ಕ್ರಮವು ನಿಯಮಗಳಿಗನುಗುಣವಾಗಿಲ್ಲ. ಗುತ್ತಿಗೆದಾರರು ಲೈಸನ್ಸ್ ಪಡೆಯದೇ ಇರುವುದು ಕಾನೂನು ಉಲ್ಲಂಘನೆಯಾಗುತ್ತದೆ.

ಆ) ಲೈಸನ್ಸ್ ಪಡೆಯದ ಗುತ್ತಿಗೆದಾರರ ವಿರುದ್ಧ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲಾಗಿದೆ.

ಇ) ಸರ್ಕಾರದ ಗಮನಕ್ಕೆ ಬಂದಿದೆ.

ಈ) ಇಲ್ಲ.

839(174) ಶ್ರೀ ಶಿವಾನಂದ ನಾಯಕ್ (ಭಟ್ಕಳ): ಮಾನ್ಯ ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಭಟ್ಕಳ ಮತ್ತು ಹೊನ್ನಾವರ ತಾಲ್ಲೂಕಿನಲ್ಲಿ ಈವರೆಗೆ ಪ್ರವಾಸೋದ್ಯಮ ಇಲಾಖೆಯು ಸಹಾಯಧನ ನೀಡಿರುವ ವಸತಿ ಗೃಹಗಳು ಯಾವುವು;

ಆ) ಸಹಾಯಧನ ನೀಡಲು ವಿಳಂಬವಾಗುತ್ತಿರುವ ಹಾಗೂ ಅದರಲ್ಲಿ ಅವ್ಯವಹಾರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಇ) ಹಾಗಿದ್ದಲ್ಲಿ ಈ ಅವ್ಯವಹಾರ ನಿಲ್ಲಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ: (ವಿವರ ಒದಗಿಸುವುದು).

ಶ್ರೀ ಡಿ. ಟಿ. ಜಯಕುಮಾರ್ (ಪ್ರವಾಸೋದ್ಯಮ ಸಚಿವರು) :